ಅಡಕ - 18

ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು.

ಸಂ. : LD 39 PRS 2005

ದಿನಾಂಕ : 02-12-2005

ವಿಷಯ : ಕರ್ನಾಟಕ ನಾಗರೀಕ ಸೇವಾ (ನಡೆತೆ) ನಿಯಮಗಳು 1966 ರ ನಿಯಮ 29 ಎ ಪ್ರಕಾರ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಮನೆ ಕೆಲಸಗಳಿಗೆ ನೇಮಿಸಿಕೊಂಡಿರುವ ಸರ್ಕಾರಿ ನೌಕರರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವ ಕುರಿತು.

ಉಲ್ಲೇಖ : ಸರ್ಕಾರದ ಅದಿಸೂಚಿನೆ ಸಂಖ್ಯೆ ಡಿಪಿ ಎ ಆರ್ 3 ಎಸ್ ಆರ್ ಸಿ 97 ದಿ. 11-11-1997

ಸರ್ಕಾರವು ಉಲ್ಲೇಖಿತ ಅಧಿಸೂಚನೆಯ ಮುಖೇನ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ಕ್ಕೆ ತಿದ್ದುಪಡಿ ಮಾಡಿ ಹೊಸ ನಿಯಮ 29 ಎ ಅನ್ನು ಸೇರಿಸಲಾಗಿದೆ. ಅದರ ಪ್ರಕಾರ ಸರ್ಕಾರಿ ನೌಕರರು 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಮನೆ / ಗೃಹ ಕೃತ್ಯ ಕೆಲಸಗಳಿಗೆ ನೇಮಿಸಿಕೊಳ್ಳುವುದನ್ನು ನಿಷೇಧಿಸಲಾಗಿದೆ.

ಅದರಂತೆ ಸದರಿ ನಿಯಮಗಳನ್ನು ಉಲ್ಲಂಘನೆ ಮಾಡಿದ ಸರ್ಕಾರಿ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ 1957 ರ ಅನುಸಾರ ವಿಚಾರಣೆಯನ್ನು ನಡೆಸಿ ಸದರಿ ನಿಯಮಗಳ ನಿಯಮ 8 (V) ರಿಂದ (VII) ರ ವರೆಗಿನ ಶಿಕ್ಷೆಗಳನ್ನು ವಿಧಿಸಬಹುದಾಗಿದೆ ಕಾರಣ ಇಂತಹ ಪ್ರಕರಣಗಳಲ್ಲಿ ಸಂಬಂಧಪಟ್ಟ ಪ್ರಾಧಿಕಾರಿಗಳು ಅಂತಹ ನೌಕರರ ವಿರುದ್ಧ ವಿಚಾರಣೆ ನಡೆಸಿ, ಸೂಕ್ತ ಶಿಸ್ತಿನ ಕ್ರಮ ತೆಗೆದುಕೊಳ್ಳಬೇಕಾಗಿದೆ.

ಆದರೆ ಕೆಲವೊಂದು ಸರ್ಕಾರಿ ನೌಕರರು ರಾಜಾರೋಷವಾಗಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಮನೆ ಕೆಲಸ / ಗೃಹ ಕೃತ್ಯ ಕೆಲಸಗಳಿಗೆ ತೊಡಗಿಸಿಕೊಂಡು ಸದರಿ ನಿಯಮಗಳನ್ನು ಉಲ್ಲಂಘಿಸುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅಂತಹ ನೌಕರರನ್ನು ಗುರುತಿಸಿ ಶಿಕ್ಷೆಗೆ ಒಳಪಡಿಸಲು ಸದರಿ ನಿಯಮಗಳ ಅಡಿ ಅವಕಾಶವಿದ್ದರು ಸಂಬಂಧಪಟ್ಟ ಅಧಿಕಾರಿಗಳು ಯಾವುದೇ ಕ್ರಮ ತೆಗೆದುಕೊಳ್ಳದೇ ಇರುವುದು ಸಹ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆದ್ದರಿಂದ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಮನೆ / ಗೃಹ ಕೃತ್ಯ ಕೆಲಸಗಳಿಗೆ ನೇಮಿಸಿಕೊಳ್ಳುವ ಸರ್ಕಾರಿ ನೌಕರರ ವಿರುದ್ಧ ಸದರಿ ನಿಯಮಗಳ ಅನುಸಾರ ಶಿಸ್ತಿನ ಕ್ರಮ ಜರುಗಿಸುವ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಲು ಸರ್ಕಾರದ ಸಚಿವಾಲಯದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು ಹಾಗೂ ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಈ ಮೂಲಕ ಸೂಚಿಸಿದೆ.

(ಬಿ. ಕೆ. ದಾಸ್)
ಮುಖ್ಯ ಕಾರ್ಯದರ್ಶಿಗಳು,
ಕರ್ನಾಟಕ ಸರ್ಕಾರ

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2) ಎಲ್ಲಾ ಇಲಾಖಾ ಮುಖ್ಯಸ್ಥರುಗಳು
3) ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು